**ದಿನಾಂಕಃ 26.03.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 3ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ಆ ದಿನ ನಾನು ಕೋಲಾರಕ್ಕೆ ಹೋಗುತ್ತಿದ್ದೆನು. ಆ ದಿನ ದ್ವಿಚಕ್ರ ವಾಹನವನ್ನು ಮಂಜು ಎಂಬುವವರು ಚಾಲನೆ ಮಾಡುತ್ತಿದ್ದರು. ಸದರಿ ದ್ವಿಚಕ್ರ ವಾಹನವನ್ನು ಆತ ನಿಧಾನಗತಿಯಲ್ಲಿ ಚಾಲನೆ ಮಾಡುತ್ತಿದ್ದ. ಆಪಾದಿತ ವಾಹನ ನಮ್ಮ ಎದುರಿನಿಂದ ಬಂದಿರುತ್ತದೆ. ಮಂಜು ವಾಹನವನ್ನು 80 ಕಿ.ಮೀ ಗಿಂತ ಹೆಚ್ಚಿ ನ ವೇಗದಲ್ಲಿ ವಾಹನ ಚಾಲನೆ ಮಾಡುತ್ತಿದ್ದು, ಅದರ ಪರಿಣಾಮ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ.

ಅಪಘಾತದಲ್ಲಿ ನನಗೆ ಸಣ್ಣಪುಟ್ಟ ಗಾಯಗಳು ಆಗಿವೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ಉಂಟಾದ ಗಾಯಗಳು ಸಂಪೂರ್ಣವಾಗಿ ವಾಸಿಯಾಗಿವೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಮೊದಲಿನಂತೆ ಓಡಾಡಲು ಆಗುವುದಿಲ್ಲ ಎಂದು ನುಡಿಯುತ್ತಾರೆ. ಅಪಘಾತದಲ್ಲಿ ನನಗೆ ಮೂಳೆ ಮುರಿತ ಗಾಯಗಳು ಆಗಿಲ್ಲ ಎಂದರೆ ಸರಿ. ನನಗೆ ಯಾವುದೇ ಶಸ್ತ್ರ ಚಿಕಿತ್ಸೆ ಆಗಿಲ್ಲ ಎಂದರೆ ಸರಿಯಲ್ಲ. ಆದ ಕಾರಣ ಬಿಡುಗಡೆ ಸಮರಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಒಳರೋಗಿಯಾಗಿ ದಾಖಲಾದ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ರೂ.200/- ಗಳಿಗೆ ಮಾತ್ರ ಮೆಡಿಕಲ್ ಬಿಲ್ಲನ್ನು ಹಾಜರುಪಡಿಸಿರುತ್ತೇನೆ ಎಂದರೆ ಸರಿ. ನಾನು ಕೇವಲ ಹೊರರೋಗಿಯಾಗಿ ಚಿಕಿತ್ಸೆ ಪಡೆದಿದ್ದು, ಪರಿಹಾರ ಪಡೆಯಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಎಸ್.ಎನ್.ಆರ್ ಆಸ್ಪತ್ರೆಯ ಸಂಬಂಧಪಟ್ಟ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಚಿಕಿತ್ಸೆಗೆ ಮತ್ತು ಓಡಾಟಕ್ಕೆ ನಾನು ಹೇಳುವಷ್ಟು ಹಣವನ್ನು ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಮುಂದುವರೆದ ಚಿಕಿತ್ಸೆ ಪಡೆದ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ ಮತ್ತು ನಾನು ಮುಂದುವರೆದ ಚಿಕಿತ್ಸೆ ಪಡೆದಿಲ್ಲ ಎಂದರೆ

ಸರಿಯಲ್ಲ. ಮೆಡಿಕಲ್ ಬಿಲ್ಲುಗಳನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ವೈದ್ಯರು ನನಗೆ ಸುಮಾರು ಒಂದು ವರ್ಷ ವಿಶ್ರಾಂತಿ ಪಡೆಯುತಂವೆ ತಿಳಿಸಿರುತ್ತಾರೆ. ನನಗೆ ಸಣ್ಣಪುಟ್ಟ ಗಾಯಗಳು ಆದ ಕಾರಣ ವಿಶ್ರಾಂತಿಯ ಅವಶ್ಯಕತೆ ಇಲ್ಲ ಎಂದರೆ ಸರಿಯಲ್ಲ. ನನಗೆ ಆರೋಗ್ಯ ವಿಮಾ ಸೌಲಭ್ಯ ಇರಲಿಲ್ಲ. ನಮ್ಮ ಕುಟುಂಬಕ್ಕೆ ಬಿಪಿಎಲ್ ಪಡಿತರ ಚೀಟಿ ಇದೆ. ಸದರಿ ಪಡಿತರ ಚೀಟಿಯಿಂದ ನನಗೆ ಉಚಿತ ಚಿಕಿತ್ಸೆ ನೀಡಲಾಗಿದೆ ಎಂದರೆ ಸರಿಯಲ್ಲ. ನಾನು ಮೊದಲಿನಂತೆ ಈಗಲೂ ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ.

ನನಗೆ ಈಗ 60 ವರ್ಷ ವಯಸ್ಸು ಆಗಿರುತ್ತದೆ. ನನ್ನ ಜನ್ಮ ದಿನಾಂಕ ನೆನಪಿಲ್ಲ. ನನಗೆ 70ಕ್ಕಿಂತಲೂ ಹೆಚ್ಚಿ ನ ವಯಸ್ಸು ಆಗಿದೆ ಎಂದರೆ ಸರಿಯಲ್ಲ. ನಾನು ಹೇಳುವ ತೊಂದರೆಗಳು ವಯೋಸಹಜ ತೊಂದರೆಗಳು ಆಗಿದ್ದು, ಅಪಘಾತದ ಗಾಯಗಳಿಂದ ಉಂಟಾಗಿಲ್ಲ ಎಂದರೆ ಸರಿಯಲ್ಲ. ನಾನು ಕೂಲಿ ಕೆಲಸ ಮಾಡುತ್ತಿದ್ದೆ. ನನ್ನ ಕೆಲಸ ಮತ್ತು ಆದಾಯಕ್ಕೆ ಸಂಬಂಧಿಸಿದಂತೆ ಸುಳ್ಳು ಹೇಳುತ್ತಿದ್ದು, ಅದಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನನಗೆ ನಾಲ್ಕು ಜನ ಮಕ್ಕಳಿದ್ದು, ಅದರ ಪೈಕಿ ಇಬ್ಬರು ಗಂಡು ಮಕ್ಕಳು ಮತ್ತು ಇಬ್ಬರು ಹೆಣ್ಣುಮಕ್ಕಳು. ನನ್ನ ಗಂಡು ಮಕ್ಕಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಪ್ರಮಾಣ ಪತ್ರದ ಖಂಡಿಕೆ 6 ರಲ್ಲಿ ಹೇಳಿರುವ ಸಂಗತಿಗಳು ಸುಳ್ಳು ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**